**ಪಿಡಬ್ಲೂ-1**

**ಸಾಕ್ಷಿಯನ್ನು ಕರೆಸಿ ಪ್ರಮಾಣೀಕರಿಸಲಾಯಿತು, ದಿನಾಂಕ. 09-02-2024**

**ಮುಖ್ಯ ವಿಚಾರಣೆಃ ಶ್ರೀ ಡಿ ವಿ ವಾದಿ ಪರ ವಕೀಲರಿಂದ**

ಈ ದಾವೆಯಲ್ಲಿ ನಾನು ವಾದಿ ಬ್ಯಾಂಕಿನ ಮ್ಯಾನೇಜರ್ ಆಗಿದ್ದು, ನಾನು ನನ್ನ ಮುಖ್ಯ ವಿಚಾರಣೆಯನ್ನು ಪ್ರಮಾಣ ಪತ್ರದ ಮೂಲಕ ಹಾಜರುಪಡಿಸಿದ್ದೇನೆ. ಅದರಲ್ಲಿ ಹೇಳಿರುವ ಎಲ್ಲಾ ವಿಷಯಗಳು ನಾನೇ ಹೇಳಿ ಬರೆಸಿದ್ದು ಅವು ಸತ್ಯವಾಗಿದೆ.

1. ಈ ದಿನ ನಾನು ಪ್ರತಿವಾದಿಯು ಸಲ್ಲಿಸಿದ ಕೃಷಿ ಸಾಲದ ಅರ್ಜಿಯನ್ನು ಹಾಜರುಪಡಿಸಿರುತ್ತೇನೆ. ಅದನ್ನು ನಿಪಿ-1 ಎಂದು ಗುರುತಿಸಲಾಯಿತು.

2. ಕೃಷಿ ಸಾಲವನ್ನು ನೀಡುವ ಸಮಯದಲ್ಲಿರುವ ಷರತ್ತುಗಳ ಪತ್ರವನ್ನು ಹಾಜರುಪಡಿಸಿರುತ್ತೇನೆ. ಅದನ್ನು ನಿಪಿ-2 ಎಂದು ಗುರುತಿಸಲಾಯಿತು.

3. ಹೈಪೋತಿಕೇಶನ್ ಕರಾರು ಪತ್ರದ ಅಸಲು ಪ್ರತಿಯನ್ನು ಹಾಜರುಪಡಿಸಿರುತ್ತೇನೆ. ಅದನ್ನು ನಿಪಿ-3 ಎಂದು ಗುರುತಿಸಲಾಯಿತು.

4. ದಿ. 26-02-2018 ರಂದು ಪ್ರತಿವಾದಿಗೆ ನೀಡಿದ ನೋಟೀಸ್ ನ ಕಚೇರಿ ಪ್ರತಿಯನ್ನು ಹಾಜರುಪಡಿಸಿರುತ್ತೇನೆ. ಅದನ್ನು ನಿಪಿ-4 ಎಂದು ಗುರುತಿಸಲಾಯಿತು.

5. ಅಂಚೆ ಹಿಂಬರಹವನ್ನು ಹಾಜರುಪಡಿಸಿರುತ್ತೇನೆ. ಅದನ್ನು ನಿಪಿ-5 ಎಂದು ಗುರುತಿಸಲಾಯಿತು.

6. ಪ್ರತಿವಾದಿಯು ಹೊಂದಿರುವ ಸಾಲದ ಖಾತೆಯ ದಿ. 15-09-2012 ರಿಂದ ದಿ. 14-06-2019 ರವರೆಗಿನ ಎಕ್ಸ್ ಟ್ರಾಕ್ಟ್ ದೃಡೀಕೃತ ಪ್ರತಿಯನ್ನು ಹಾಜರುಪಡಿಸಿರುತ್ತೇನೆ. ಅದನ್ನು ನಿಪಿ-6 ಎಂದು ಗುರುತಿಸಲಾಯಿತು.

(ಈ ಹಂತದಲ್ಲಿ ಪ್ರತಿವಾದಿಯರ ವಿರುದ್ಧ ಏಕತರ್ಫಿ ಆದೇಶ ಇರುವುದರಿಂದ ಪಾಟೀ ಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು)

(ಉಕ್ತಲೇಖನವನ್ನು ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು)

ಓ. ಹೇ. ಕೇ. ಸ. ಎ ಒಪ್ಪಲಾಗಿದೆ.

2 ನೇ ಅಪರ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್ ಸಿ.,

ದೇವನಹಳ್ಳಿ.